ಶ್ರೀ ಎಂ. ಮಹದೇವ್:- ಮಾನ್ಯ ಅಧ್ಯಕ್ಷರೆ, ತಕ್ಷಣದಲ್ಲಿ ನಾವು ಕ್ರಮ ತೆಗೆದುಕೊಳ್ಳತ್ತೇವೆ. ಮತ್ತೆ ಈ ಸಂದರ್ಭದಲ್ಲಿ ನಾನು ಹೇಳುವುದೇನೆಂದರೆ, ಅಡಳಿತದಲ್ಲಿ ಇನ್ನೊಬ್ಬರ ಹಸ್ತಕ್ಷೇಪವನ್ನು ನಾವು ಸಹಿಸುವುದಿಲ್ಲ ಹಾಗೆಯೇ ಹಸ್ತಕ್ಷೇಪ ಮಾಡುವುದಕ್ಕೆ ಬಿಡುವುದಿಲ್ಲ ಮಾನ್ಯ ಸದಸ್ಯರು ರಾಜ್ಯದ ಜನತೆಯ ದೃಷ್ಟಿಯಿಂದ ಒಳ್ಳೆಯ ಸಲಹೆಯನ್ನು ಕೊಟ್ಟಿದ್ದಾರೆ. ಅದು ಸರ್ಕಾರದ ಗಮನಕ್ಕೆ ಬಂದಿದ್ದು ಅದನ್ನು ಅನುಷ್ಠಾನಗೊಳಿಸುವುದಕ್ಕೆ ಪ್ರಯತ್ನ ಮಾಡುತ್ತೇವೆ.

ಅಧ್ಯಕ್ಷರು:- ಈಗ ಇನ್ನೂ ಮೂರು ಪ್ರಶ್ನೆಗಳಿಗೆ ಉಳುದುಕೊಂಡಿವೆ. ಇದನ್ನು ಮುಂದಿನ ಅಧವಾ ಅದರ ಮುಂದಿನ ವಾರ ತೆಗೆದುಕೊಳ್ಳುತ್ತೇನೆ. ಆದರೆ, ಯಾವುದೇ ಕಾರಣಕ್ಕೂ ಲ್ಯಾಪ್ಸ್ ಆಗುವುದಿಲ್ಲ. ಈಗ ಪ್ರಶ್ನೋತ್ತರ ವೇಳೆ ಮುಗಿಯಿತು. ಈಗ ಲಿಖಿತದ ಮೂಲಕ ಉತ್ತರಿಸುವ ಪ್ರಶ್ನೆಗಳು.

(ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಡಿ.ಬಿ. ಚಂದ್ರೇಗೌಡ:- (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೆ, ದಿನಾಂಕ: 10.07.2002ರ ಲಿಖಿತದ ಮೂಲಕ ಉತ್ತರಿಸುವಂತಹ 25 ಪ್ರಶ್ನೆಗಳ ಪೈಕಿ 23 ಪ್ರಶ್ನೆಗಳಿಗೆ ಸಂಬಂಧಪಟ್ಟಂಥ ಉತ್ತರವನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:- ಮಂಡಿಸಲಾಯಿತು.

## ಅನುಬಂಧ (1)

## 2. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಡಿ.ಬಿ. ಚಂದ್ರೇಗೌಡ ಕಾನೂನು ಮತ್ತು ಸಂಸದೀಯ ಸಚಿವರು ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿ) ಪರವಾಗಿ ಅವರು:- ಮಾನ್ಯ ಅಧ್ಯಕ್ಷರೆ,

1976ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮ ಕಲಂ 47ರ ಮೇರೆಗೆ

I. 1. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ 2000-2001ನೇ ಸಾಲಿನ ವಾರ್ಷಿಕ ಅಡಳಿತ ವರದಿಯನ್ನು ಮಂಡಜಿಸುತ್ತೇನೆ.

II ಶ್ರೀ ಡಿ.ಬಿ. ಚಂದ್ರೇಗೌಡ, ಅಧ್ಯಕ್ಷರು ಮಂಡಿಸಲಾಯಿತು (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರ ಪರವಾಗಿ ಅವರು:- ಮಾನ್ಯ ಅಧ್ಯಕ್ಷರೆ 1980ರ ಕಾಡಾ ಅಧಿನಿಯಮ 25ನೇ ಕಲಂ ಮೇರೆಗೆ:-

2. ಭದ್ರಾ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ 2000-2001ನೇ ಸಾಲಿನ ವಾರ್ಷಿಕ ಅಡಳಿತ ವರದಿಯನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:- ಮಂಡಿಸಲಾಗಿದೆ.

III ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು):- ಮಾನ್ಯ ಅಧ್ಯಕ್ಷರೇ 1993ರ ಕರ್ನಾಟಕ ಪಂಚಾತ್ ರಾಜ್ ಅಧಿನಿಯಮ 262(3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ:-

3. ಉಡುಪಿ ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ಆಡಳಿತ ವರದಿ.
4. ಬೀದರ್ ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ಆಡಳಿತ ವರದಿ.
5. ಹಾವೇರಿ ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ಆಡಳಿತ ವರದಿ.
6. ಮಂಡ್ಯ ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ಆಡಳಿತ ವರದಿ.
7. ಗದಗ ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ಆಡಳಿತ ವರದಿ.
8. ಚಿಕ್ಕಮಂಗಳೂರು ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ವರದಿ.
9. ಕೋಲಾರ ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ಆಡಳಿತ ವರದಿ.
10. ಗುಲ್ಬರ್ಗಾ ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ಆಡಳಿತ ವರದಿ.
11. ಬೆಳಗಾಂ ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ಆಡಳಿತ ವರದಿ.
12. ಕೊಡಗು ಜಿಲ್ಲಾ ಪಂಚಾಯತ್ 2000-2001ನೇ ಸಾಲಿನ ವಾರ್ಷಿಕ ಆಡಳಿತ ವರದಿ.
13. ಮಂಡ್ಯಜಿಲ್ಲಾ ಪಂಚಾಯತ್ 1998-1999ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.
14. ಮೈಸೂರುಜಿಲ್ಲಾ ಪಂಚಾಯತ್ 1999-2000ನೇ ಸಾಲಿನ ವಾರ್ಷಿಕ ಲೆಕ್ಕಗಳು ಮತ್ತು ಲೆಕ್ಕ ಪರಿಶೋಧನಾ ವರದಿ.
15. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ 1998-99 ವಾರ್ಷಿಕ ಲೆಕ್ಕ ತನಿಖಾ ವರದಿಯನ್ನು ಮಂಡಿಸುತ್ತೇನೆ.

IV ಶ್ರೀ ಡಿ.ಟಿ ಚಂದ್ರೇಗೌಡ, (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ:- ಅವರು ಮಾನ್ಯ ಅಧ್ಯಕ್ಷರೆ

ಶ್ರೀ ಕೆ.ಹೆಚ್. ರಂಗನಾಥ್:- (ಅರಣ್ಯ ಸಚಿವರ ಪರವಾಗಿ ಅವರು ಮಾನ್ಯ ಅಧ್ಯಕ್ಷರೆ,

1956ರ ಕಂಪನಿ ಕಾಯ್ದೆ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:-

16. ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತದ 2000-2001ನೇ ಸಾಲಿನ 30ನೇ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

V ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರ ಪರವಾಗಿ):- ಅವರು ಮಾನ್ಯ ಅಧ್ಯಕ್ಷರೆ

1956ರ ಕಂಪನಿಗಳ ಅಧಿನಿಯಮ ಕಾಯ್ದೆ 619(ಎ) ರ ಪ್ರಕರಣದ ಮೇರೆಗೆ:-

17. ಕರ್ನಾಟಕ ರಾಜ್ಯ ಮಹಿಳಾ ಆಯೋಗದ 31.3.2001ಕ್ಕೆ ಅಂತ್ಯಗೊಂಡಂತೆ, 2000-01ನೇ ಆರ್ಥಿಕ ಸಾಲಿನ ಲೆಕ್ಕ ಪರಿಶೋಧನಾ ವರದಿ.

18. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ 2000-2001ನೇ ಆರ್ಥಿಕ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪತ್ರ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

VI ಶ್ರೀ ಹೆಚ್.ವಿಶ್ವನಾಥ್ (ಸಹಕಾರ ಸಚಿವರ ಪರವಾಗಿ):- ಅವರು ಮಾನ್ಯ ಅಧ್ಯಕ್ಷರೆ,

1962ರ ಉಗ್ರಾಣ ನಿಗಮದ ಕಾಯ್ದೆಯ 31(110)ನೇ ಪ್ರಕರಣದ ಮೇರೆಗೆ:-

19. ಕರ್ನಾಟಕ ರಾಜ್ಯ ಉಗ್ರಾಣ ನಿಗಮದ 2000-2001ನೇ ಸಾಲಿನ 43ನೇ ವಾರ್ಷಿಕ ವರದಿ ಮತ್ತು ಪರಿಶೋಧಿತ ಲೆಕ್ಕಪತ್ರ ವರದಿಯನ್ನು ಮಂಡಿಸುತ್ತೇನೆ.

VII ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು):- ಅವರು ಮಾನ್ಯ ಅಧ್ಯಕ್ಷರೆ,

1977ರ ಕರ್ನಾಟಕ ಗೃಹ ಮಂಡಳಿಯ ಕಾಯ್ದೆ 65, 66(3)ನೇ ಪ್ರಕರಣದ ಮೇರೆಗೆ:-

20. ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿಯ 2000-2002ನೇ ಸಾಲಿನ ಲೆಕ್ಕತನಿಖಾ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು:- ಮಂಡಿಸಲಾಯಿತು.

VIII ಶ್ರೀ ರೋಷನ್ ಬೇಗ್, (ಸಣ್ಣ ಕೈಗಾರಿಕಾ ಮತ್ತು ಹೆಜ್ ಸಚಿವರು):- ಅವರು

1995ರ ಕಂಪೆನಿ ಕಾಯ್ದೆ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:-

21. ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ 1999-2000ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ ಮತ್ತು 2000-2001ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುವುದು.

ಶ್ರೀ ಆರ್.ವಿ ದೇಶಪಾಂಡೆ (ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಸಚಿವರು):- ಅವರು

1956ರ ಕಂಪನಿ ಕಾಯ್ದೆ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:-

22. ಎನ್.ಜಿ.ಇ.ಎಫ್ 36ನೇ ವಾರ್ಷಿಕ ವರದಿ ಮತ್ತು ಲೆಕ್ಕಪತ್ರ 2000-2001ರ ವರದಿಯೇನು

23. ತುಂಗಭದ್ರಾ ಸ್ಟೀಲ್ ಪ್ರಾಡಕ್ಟ್ಸ್ ಲಿಮಿಟೆಡ್‌ನ 2000-2001ರ 41ನೇ ವಾರ್ಷಿಕ ವರದಿಯನ್ನು ಮಂಡಿಸುವುದು.

**X** ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು):- ಅವರು

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ:-

24. ಶಿವಮೊಗ್ಗ ನಗರಾಭಿವೃದ್ಧಿ ಪ್ರಾಧಿಕಾರದ 2000-2001ನೇ ಸಾಲಿನ ವಾರ್ಷಿಕ ವರದಿ.

25. ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ 2001-2002ನೇ ಸಾಲಿನ ವಾರ್ಷಿಕ ವರದಿ.

26. ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ 2001-2002ನೇ ಸಾಲಿನ ವಾರ್ಷಿಕ ವರದಿ.

27. ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ 2000-2001ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

28. ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರ 2000-2001ನೇ ಸಾಲಿನ ಲೆಕ್ಕ ತನಿಖಾ ವರದಿಯನ್ನು ಮಂಡಿಸುವುದು.

**XI** ಶ್ರೀ ರಮಾನಾಥ ರೈ (ಸಾರಿಗೆ ಸಚಿವರು):- ಅವರು

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕಾಯ್ದೆ 1950ರ 35(2) ರ ಮೇರೆಗೆ:-

29. 2000-2001ನೇ ಸಾಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುವುದು.

ಡಾ: ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು):- ಅವರು

1976ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 45(2), 47(4)ನೇ ಪ್ರಕರಣದ ಮೇರೆಗೆ:-

30. ಮೈಸೂರು ವಿಶ್ವವಿದ್ಯಾನಿಲಯ 84ನೆಯ ವಾರ್ಷಿಕ ವರದಿ 1999-2000.

31. ಕುವೆಂಪು ವಿಶ್ವವಿದ್ಯಾಲಯದ 2000-2001ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುವುದು.

**XIII** ಶ್ರೀ ರಾಮಲಿಂಗಾರೆಡ್ಡಿ (ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಯವರು) ಅವರು ಮಾನ್ಯ ಅಧ್ಯಕ್ಷರೆ

1956ರ ಕಂಪ ಕಾಯ್ದೆ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:-

32. ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ 2001-2002ರ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು:- ಮಂಡಿಸಲಾಯಿತು.

XIV ಶ್ರೀ ಡಿ.ಬಿ. ಇನಾಂದಾರ್ (ಪ್ರವಾಸೋದ್ಯಮ ಹಾಗೂ ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು): ಅವರು

1956ರ ಕಂಪನಿ ಕಾಯ್ದೆ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:-

33. ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ಸಂಸ್ಥೆ ಬೆಂಗಳೂರು 21ನೇ ವಾರ್ಷಿಕ ವರದಿ 2000-2001ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುವುದು.

XV ಶ್ರೀ ಬಸವರಾಜ್ ಹೆಚ್. ಪಾಟೀಲ (ಇಂಧನ ರಾಜ್ಯ ಸಚಿವರು):- ಅವರು

1956ರ ಕಂಪನಿ ಕಾಯ್ದೆ ಅಧಿನಿಯಮ 619(ಎ)ರ ಪ್ರಕರಣದ ಮೇರೆಗೆ:-

34. ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ 2000-2001ನೇ ಸಾಲಿನ ವಾರ್ಷಿಕ ವರದಿ.

35. ವಿಶ್ವೇಶ್ವರಯ್ಯ ವಿದ್ಯುತ್ ನಿಗಮ ನಿಯಮಿತ 2000-2001ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.

1999ರ ಕರ್ನಾಟಕ ವಿದ್ಯುಚ್ಛಕ್ತಿ ಅಧಿನಿಯಮದ ಅನುಸೂಚಿ ಭಾಗ 1ರ ಕಂಡಿಕೆ 5ರ ಮೇರೆಗೆ:-

36. ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ 2000-2001ನೇ ಸಾಲಿನ ಲೆಕ್ಕಪತ್ರ ಹಾಗೂ 2ನೇ ವಾರ್ಷಿಕ ವರದಿ 2000-2001ಯನ್ನು ಮಂಡಿಸುವುದು.

ಟಿ. ರಾಜಣ್ಣ
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

## 3. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

(ಅ) ವಿಷಯ:- ಕೊಪ್ಪಳದಲ್ಲಿ ಡಾ: ಅಂಬೇಡ್ಕರ್ ಪ್ರತಿಮೆಗೆ ಕೆಲವು ದುಷ್ಕರ್ಮಿಗಳು ಅವಮಾನ ಮಾಡಿರುವ ಬಗ್ಗೆ.

ಶ್ರೀ ಬಿ. ಸೋಮಶೇಖರ್(ಮಳವಳ್ಳಿ):- ಸನ್ಮಾನ್ಯ ಅಧ್ಯಕ್ಷರೆ, ನನಗೆ ಮಾತನಾಡುವ ಅವಕಾಶ ಕೊಟ್ಟಿದ್ದಕ್ಕಾಗಿ ನಾನು ತಮಗೆ ಅಭಿನಂದನೆಯನ್ನು ಸಲ್ಲಿಸುತ್ತೇನೆ. ಮಂಗಳವಾರ ಕೊಪ್ಪಳದಲ್ಲಿ ಡಾ।। ಅಂಬೇಡ್ಕರ್ ಪ್ರತಿಮೆಗೆ ಕೆಲವು ದುಷ್ಕರ್ಮಿಗಳು ಅವಮಾನ ಮಾಡಿದ್ದರಿಂದ, ಅಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾಗಿದೆ. ಅಲ್ಲಿ ಜನರು ಬೀದಿಗಳಲ್ಲಿ ಮೆರವಣಿಗೆ ಮಾಡಿಕೊಂಡು